ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಹೊಸ ತಾಲ್ಲೂಕಿನ ಆಸ್ಪತ್ರೆಗಳ ಸೌಕರ್ಯಗಳ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)-

21 (124) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೀದರ್ ಜಿಲ್ಲೆಯಲ್ಲಿ ಹೊಸದಾಗಿ ರಚಿಸಲಾದ ತಾಲ್ಲೂಕುಗಳ ಆಸ್ಪತ್ರೆಗಳಿಗೆ ಕಳೆದ ಒಂದು ವರ್ಷದಿಂದ ಖರೀದಿಸಲಾಗಿರುವ ವೈದ್ಯಕೀಯ ಉಪಕರಣಗಳಾವುವು ; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಪ್ರತಿ ಆಸ್ಪತ್ರೆಗೆ ಸರಾಸರಿಯಾಗಿ ಎಷ್ಟೆಷ್ಟು ಮೊತ್ತದ ವಿವಿಧ ಉಪಕರಣಗಳನ್ನು ಖರೀದಿಸಲಾಗಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಇ) ಹೊಸದಾಗಿ ಖರೀದಿಸಲಾದ ವೈದ್ಯಕೀಯ ಉಪಕರಣಗಳನ್ನು, ಯಂತ್ರಗಳನ್ನು ನಿರ್ವಹಿಸಲು ನುರಿತ ಅಧಿಕಾರಿ/ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಜನರನ್ನು ನೇಮಿಸಿಕೊಳ್ಳಲಾಗಿದೆ ; (ಹುದ್ದೆವಾರು ಸ್ಪಷ್ಟ ವಿವರ ನೀಡುವುದು)

(ಈ) ನೇಮಕ ಮಾಡಿಕೊಳ್ಳದಿದ್ದಲ್ಲಿ ಸಾರ್ವಜನಿಕರು ಆರೋಗ್ಯ ಸೇವೆಯಿಂದ ವಂಚಿತರಾಗುವುದಿಲ್ಲವೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?